ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

**File No:** DTE-ADMI0ACM2/118/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001.
ದಿನಾಂಕ:01-10-2021.

**ಸು ತ್ತೋ ಲೆ**

**ವಿಷಯ:** 2021-22ನೇ ಶೈಕ್ಷಣಿಕ ಸಾಲಿನ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಹಗಲು ಪಾಳೀಯ & ಪಾರ್ಟ್ ಟೈಂ ಡಿಪ್ಲೋಮಾ ಕೋರ್ಸುಗಳ ಪ್ರಥಮ ಸೆಮಿಸ್ಟರ್ ತರಗತಿಗೆ ಮರುಪ್ರವೇಶ ಪಡೆಯಲು ಅನುಸರಿಸಬೇಕಾದ ಕ್ರಮಗಳ ಕುರಿತು.

**ಉಲ್ಲೇಖ** ಈ ಕಛೇರಿ ಸುತ್ತೋಲೆ ಪತ್ರ ಸಂ. DTE-ADMI0ACM2/116/2021 ದಿ:18-09-2021 (ಪ್ರಥಮ ಸೆಮಿಸ್ಟರ್ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟ)

-0000000-

2021-22ನೇ ಶೈಕ್ಷಣಿಕ ಸಾಲಿನ ರಾಜ್ಯದ ಎಲ್ಲಾ ಡಿಪ್ಲೋಮಾ ಕಾಲೇಜುಗಳಲ್ಲಿ ಸರ್ಕಾರದ ಆದೇಶ ಸಂ. ಇಡಿ 197 ಯುಎನ್‌ಇ 2020, ದಿ:23-07-2021 ರನ್ವಯ ಅನುಸರಿಸಬೇಕಾದ ಪ್ರಮಾಣಿತ ಕಾರ್ಯಚರಣಾ ವಿಧಾನದ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು 2021-22ನೇ ಶೈಕ್ಷಣಿಕ ಸಾಲಿನ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಿ, ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ನಿಗಧಿತ ಅವಧಿಯೊಳಗೆ ಪಾಠ ಪ್ರವಚನಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ಹಗಲು ಪಾಳೀಯ ಮತ್ತು ಪಾರ್ಟ್‌ಟೈಂ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ತಾತ್ಕಾಲಿಕ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ(1)ರ ಈ ಕಛೇರಿ ಸುತ್ತೋಲೆಯಲ್ಲಿ ಪ್ರಕಟಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಹಗಲು ಪಾಳೀಯ ಮತ್ತು ಪಾರ್ಟ್‌ಟೈಂ ಪ್ರಥಮ ಸೆಮಿಸ್ಟರ್ ತರಗತಿಗಳಿಗೆ ರಿಪೀಟರ್ ಆಗಿ ಪ್ರವೇಶ ನೀಡುವ ಸಂಬಂಧದಲ್ಲಿ ಅನುಸರಿಸಬೇಕಾದ ಮಾರ್ಗಸೂಚಿಗಳನ್ನು ಈ ಕೆಳಗೆ ನಮೂದಿಸಲಾಗಿದೆ.

| | |
|---|---|
| ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ತರಗತಿಗೆ ಸೇರ ಬಯಸುವ ರಿಪೀಟರ್ ಅಭ್ಯರ್ಥಿಗಳ ಪ್ರವೇಶದ ಅಂತಿಮ ದಿನಾಂಕ: | ರಿಪೀಟರ್ ಪ್ರವೇಶವನ್ನು ಸಂಬಂಧಿಸಿದ ಕೋರ್ಸ್ ಇಂಟೇಕ್‌ಗೆ ಶೇ. 10ರ ಮಿತಿಯಲ್ಲಿ ಆಯಾ ಕೋರ್ಸಿಗೆ **ದಿ: 16-10-2021** ರ ಒಳಗೆ ಪ್ರವೇಶ ನೀಡುವುದು.<br>ರಿಪೀಟರ್ ಆಗಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಯಾವುದೇ ಕೋರ್ಸ್ ಬದಲಾವಣೆಗೆ ಅವಕಾಶವಿರುವುದಿಲ್ಲ. ರಿಪೀಟರ್ ಆಗಿ ಪ್ರವೇಶ ಪಡೆಯುವ ವಿದ್ಯಾರ್ಥಿಗೆ ಒಂದು ಸೆಮಿಸ್ಟರ್‌ನಲ್ಲಿ ಎರಡು ಬಾರಿ ಮಾತ್ರ ಮರು ಪ್ರವೇಶ ಪಡೆಯಲು ಅವಕಾಶ ಇರುತ್ತದೆ ಹಾಗೂ ವಿದ್ಯಾರ್ಥಿಯು ಮೊದಲು ಪ್ರವೇಶ ಪಡೆದ ವರ್ಷದಿಂದ ಮೂರು ವರ್ಷದ ಅವಧಿಯೊಳಗೆ ಮಾತ್ರ ರಿಪೀಟರ್ ಆಗಿ ಪ್ರವೇಶ ನೀಡಲು ಅವಕಾಶವಿರುತ್ತದೆ. ರಿಪೀಟರ್ ಪ್ರವೇಶದ ಅನುಮೋದನೆಗೆ ಸಂಬಂಧಿಸಿದಂತೆ ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು ಇವರಿಗೆ ಪ್ರತ್ಯೇಕವಾಗಿ ನಿಗಧಿತ ಅವಧಿ ಒಳಗೆ ಪ್ರಸ್ತಾವನೆ ಸಲ್ಲಿಸುವುದು. |

ಮೇಲೆ ನಮೂದಿಸಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಮರು ಪ್ರವೇಶ ನೀಡುವುದು. ನಿಯಮಗಳನ್ನು ಮೀರಿ ಮಾಡಿದ ಪ್ರವೇಶಗಳಿಗೆ ಸಂಬಂಧಿಸಿದ ಪ್ರಿನ್ಸಿಪಾಲರೇ ನೇರ ಜವಾಬ್ದಾರರಾಗುತ್ತಾರೆ.,

ಮರು ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಂದ ಪ್ರವೇಶದ ಸಮಯದಲ್ಲಿ ಈ ಕಛೇರಿಯ ಪ್ರವೇಶಾಧಿಸೂಚನೆ ಸಂ. DTE-ADMI0ACM2/96/2021, ದಿ:11-08-2021 (ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ) ಹಾಗೂ DTE-ADMI0ACM2/97/2021, ದಿ:12-08-2021 (ಖಾಸಗಿ ಪಾಲಿಟೆಕ್ನಿಕ್‌ಗಳಿಗೆ) ರಲ್ಲಿ ನಿಗಧಿಪಡಿಸಿರುವ ಶುಲ್ಕವನ್ನು ವಸೂಲಿ ಮಾಡುವುದು.

ಕೋವಿಡ್-19 ಹಿನ್ನಲೆಯಲ್ಲಿ ಕರೋನಾ ಸಾಂಕ್ರಾಮಿಕ ಪಿಡುಗು ನಿಯಂತ್ರಣ ಮತ್ತು ಹರಡುವಿಕೆಯನ್ನು ತೆಡಗಟ್ಟುವಲ್ಲಿ ಅನುಸರಿಸಬೇಕಾದ ಮುನ್ನಚ್ಚರಿಕೆ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಮೇಲೆ ನಮೂದಿಸಿರುವ ಮಾರ್ಗಸೂಚಿಗಳನ್ವಯ ನಿಗಧಿತ ಅವಧಿಯ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಆಯಾ ಸರ್ಕಾರಿ / ಅನುದಾನಿತ/ ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರ ಹಂತದಲ್ಲೇ ಮುಗಿಸತಕ್ಕದ್ದು. ಅವಧಿ ಮೀರಿ ಕೋರಿಕೆಗಳನ್ನು ಪರಿಗಣಿಸಬಾರದೆಂದು ಹಾಗೂ ಈ ಸಂಬಂಧದಲ್ಲಿ ಆಯುಕ್ತಾಲಯಕ್ಕೂ ಪ್ರಸ್ತಾವನೆ ಸಲ್ಲಿಸಬಾರದೆಂದು ತಿಳಿಸಲಾಗಿದೆ.

ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಗೆ,

ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ (ಹಗಲು & ಪಾರ್ಟ್ ಟೈಂ) ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ - ಸೂಕ್ತ ಮಾಹಿತಿ ಹಾಗೂ ಅನುಸರಣೆಗಾಗಿ.

**<u>ಪ್ರತಿ ಇವರಿಗೆ ಮಾಹಿತಿಗಾಗಿ:</u>**

1. ಮಾನ್ಯ ಆಯುಕ್ತರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
5. 6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಇ-ಆಡಳಿತ ವಿಭಾಗಕ್ಕೆ - ಸದರಿ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ರಿಜಿಸ್ಟ್ರಾರ್(ಪರೀಕ್ಷೆ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ಆರ್.ಡಿ.ಎಂ ವಿಭಾಗಗಳಿಗೆ.
9. ಇಆರ್‌ಎಸ್(3) ವಿಭಾಗಕ್ಕೆ
10. ಕಛೇರಿ ಪ್ರತಿ